**ಕರ್ನಾಟಕ ಸರ್ಕಾರ**

ಕ್ರಮಾಂಕ: ಇಡಿ 64 ಯುಟಿವಿ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:08.08.2011

ಇಂದ

**ಸರ್ಕಾರದ ಪ್ರಧಾನ ಕಾರ್ಯದರ್ಶಿ,**
ಉನ್ನತ ಶಿಕ್ಷಣ ಇಲಾಖೆ,
**ಬೆಂಗಳೂರು – 560 001.**

ಇವರಿಗೆ

**ಕುಲಸಚಿವರು,**
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
**ಬೆಳಗಾವಿ.**

ಮಾನ್ಯರೆ,

**ವಿಷಯ:–** ಮೈಸೂರಿನ ಎನ್.ಐ.ಇ. ಇನ್ಸಿಟಿಟ್ಯೂಟ್ ಆಫ್ ಟೆಕ್ನಾಲಜಿಯ ಹೊಸ ಕೋರ್ಸುಗಳಿಗೆ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:–** ಕಾರ್ಯದರ್ಶಿ, ಎನ್.ಐ.ಇ. ಇನ್ಸಿಟಿಟ್ಯೂಟ್ ಆಫ್ ಟೆಕ್ನಾಲಜಿ, ಮೈಸೂರು ಇವರ ಪತ್ರ ದಿನಾಂಕ 5.7.2011

---

1) **ಮೈಸೂರಿನ ಎನ್.ಐ.ಇ. ಇನ್ಸಿಟಿಟ್ಯೂಟ್ ಆಫ್ ಟೆಕ್ನಾಲಜಿಯ** 2008–09ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ **1) ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್, 2) ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ 3) ಇನ್‌ಫರ್ಮೇಷನ್ ಸೈನ್ಸ್ ಅಂಡ್ ಇಂಜಿನಿಯರಿಂಗ್ 4) ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸುಗಳನ್ನು ತಲಾ 60 ವಿದ್ಯಾರ್ಥಿ** ಪ್ರಮಾಣದೊಂದಿಗೆ ಪ್ರಾರಂಭಿಸಲು ಸಲ್ಲಿಸಿದ್ದ ಪತ್ರ ಮತ್ತು ಎ.ಐ.ಸಿ.ಟಿ.ಯ ಅನುಮೋದನೆಯ ಹಿನ್ನೆಲೆಯುಲ್ಲಿ ಸಂವೀಕ್ಷಿಸಲಾಗಿದೆ.

2)ಎ.ಐ.ಸಿ.ಟಿ.ಯ ಅನುಮೋದನೆಯನ್ನಾಧರಿಸಿ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಅಧಿನಿಯಮ 1994ರ 40(10)ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೇಲ್ಕಂಡ ಕಾಲೇಜಿನಲ್ಲಿ ಈ ಕೆಳಕಂಡ ಕೋರ್ಸುಗಳನ್ನು ಕೆಳಗೆ ನಿಗದಿಪಡಿಸಿರುವ ವಿಷಯ ಸಮೂಹ ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ 2010–11ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಿರ್ದೇಶಿತನಾಗಿದ್ದೇನೆ.

| ಕ್ರಮ ಸಂಖ್ಯೆ | ಕೋರ್ಸು | ಶೈಕ್ಷಣಿಕ ವರ್ಷ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | **ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್** | **2008–09** | **60 (ಅರವತ್ತು)** |
| 2 | **ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್** | **2008–09** | **60(ಅರವತ್ತು)** |
| 3 | ಇನ್‌ಫರ್ಮೇಷನ್ ಸೈನ್ಸ್ ಅಂಡ್ ಇಂಜಿನಿಯರಿಂಗ್ | **2008–09** | **60(ಅರವತ್ತು)** |
| 4 | **ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್** | **2008–09** | **60(ಅರವತ್ತು)** |

**ಷರತ್ತುಗಳು:–**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

..2

...ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5) ಸ್ಥಳೀಯ ವಿಚಾರಣಾ ಸಮಿತಿ, ಎ.ಐ.ಸಿ.ಟಿ.ಇ. ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13–8–1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶನನ್ನು ವಿಶ್ವವಿದ್ಯಾಲಯವು ಅನುಮೋದಿಸುವವರಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಯು.ಬಿ. ಉಳವಿ) 09/8
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

ಪ್ರತಿ:–

**ಪ್ರಾಂಶುಪಾಲರು, ಎನ್.ಐ.ಇ. ಇನ್ಸಿಟಿಟ್ಯೂಟ್ ಆಫ್ ಟೆಕ್ನಾಲಜಿ, ಹೂಟಗಳ್ಳಿ ಇಂಡಸ್ಟ್ರಿಯಲ್ ಬಡಾವಣೆ, ಮೈಸೂರು**